ಬೆಂಗಳೂರು ಡಿಸ್ಟ್ರಿಕ್ಟು.

ಬೆಂಗಳೂರು ಸಬ್ ಜಡ್ಜ್‌ರವರ ಕೋರ್ಟಿನಲ್ಲಿ.

1887ನೇ ಇಸವಿ ಮಿಸಲೇನಿಯಸ್ ಅರ್ಜೀ ನಂಬರ್ 264.

ಮೃತಪಟ್ಟ ಶಿವರಂ ರಾಮಸ್ವಾಮಿಮೊದಲಿಯಾರ್ರ ಆಸ್ತಿ ವಿಷಯದಲ್ಲಿ—

ಅರ್ಜೀದಾರ ರತ್ನಮ್ಮಾಳ್, ಮೃತಪಟ್ಟ ಸದರೀ ರಾಮಸ್ವಾಮಿಮೊದಲಿಯಾರ್ರಿಗೆ ಹೆಂಡತಿ ಆಗಬೇಕೆಂಬ ಹಕ್ಕು ದಾರೀ ಮೇಲೆ ಬೆಂಗಳೂರು ಸ್ಥಳದ ರತ್ನಮ್ಮಾಳ್ ಬೆಂಗಳೂರು ವಾಸಸ್ಥರಾಗಿ ಮೃತಪಟ್ಟ ರಾಮಸ್ವಾಮಿ ಮೊದಲಿಯಾರ್ರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾಳೆ.

ಸದರೀ ದರಖಾಸ್ತುದಾರಳಾದ ರತ್ನಮ್ಮಾಳ್ ಅರ್ಜಿಯನ್ನು 1887ನೇ ಇಸವಿ ಮೇ ತಿಂಗಳು ತಾರೀಖು 27ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ರಾಮಸ್ವಾಮಿಮೊದಲಿಯಾರ್ರ ಆಸ್ತಿಗೆ ಹಕ್ಕು ದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಮಾರ್ಚೀ ತಿಂಗಳು 18ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

1887ನೇ ಇಸವಿ ಮಿ॥ ಅರ್ಜೀ ನಂಬರ್ 269.

ಮೃತಪಟ್ಟ ಚಿನ್ನಮ್ಮ ಚೆನ್ನಪ್ಪನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಬೆಂಗಳೂರು ಅರಳೇಪೇಟೆ ರಾಮಪ್ಪನ ಮಗ ದೊಮ್ಮಸಂದ್ರದ ನಾರಣಪ್ಪ ಮೃತಪಟ್ಟ ಸದರೀ ಚಿನ್ನಮ್ಮ ಚೆನ್ನಪ್ಪನಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಬೆಂಗಳೂರು ಸ್ಥಳದ ನಾರಣಪ್ಪನು ದೊಮ್ಮಸಂದ್ರದ ವಾಸಸ್ಥನಾಗಿ ಮೃತಪಟ್ಟ ಚಿನ್ನಮ್ಮ ಚೆನ್ನಪ್ಪನ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೆ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ನಾರಣಪ್ಪನ ಅರ್ಜೀಯನ್ನು 1887ನೇ ಇಸವಿ ಮೇ ತಿಂಗಳು ತಾರೀಖು 26ರಲ್ಲು ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೀ ಮಾಡಲ್ಪಡುತ್ತೆ. ಆಕಾಲದಲ್ಲಿ ಸದರೀ ಮೃತಪಟ್ಟ ಚಿನ್ನಮ್ಮ ಚೆನ್ನಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1887ನೇ ಇಸವಿ ಮಾರ್ಚೀ ತಿಂಗಳು 21ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸಿ. ಕೈಸ್,
ಸಬ್ ಜಡ್ಜ್.

ಕೋಲಾರ ಡಿಸ್ಟ್ರಿಕ್ಟು.

ತಾರೀಖು 14ನೇ ಮಾರ್ಚೀ 1887.

ಇದರಿಂದ ತಿಳಿಯಪಡಿಸುವದೇನಂದರೆ, ಕೋಲಾರ ಡಿಸ್ಟ್ರಿಕ್ಟು ಬವರಿಂಗ್‌ಪೇಟೆ ತಾಲ್ಲೂಕಿಗೆ ಶೇರಿದ ಕಾಮಸಂದ್ರದ ಜಂಗಲ್‌ನಲ್ಲಿ ಬಂದು ಅಥವಾ ಎರಡು ವರುಷಗಳ ವರಿಗೆ ಸಾದೆ ಕಡದುಕೊಳ್ಳುವ ಹಕ್ಕನ್ನು ಅಪೇಕ್ಷಿಸತಕ್ಕವರಿಂದ ಬರುವ ಮೊಹರ್ಕಾಡಿದ ದರಖಾಸ್ತುಗಳನ್ನು ಕೋಲಾರ ಡಿಸ್ಟ್ರಿಕ್ಟು ಡೆಪ್ಯೂಟಿ ಕಮ್ಮಿಷನರ್ ಸಾಹೇಬರವರು 1887ನೇ ಇಸವಿ ಏಪ್ರಿಲ್ 20ನೇ ತಾರೀಖಿನವರಿಗೆ ತೆಗದುಕ್ಕೊಳ್ಳುವರು:—

2. ಈ ಜಂಗಲ್‌ನಿಂದ ಸಾಗಿಸಲ್ಪಡುವ ಕತ್ತರಿಸದೇ ಇರುವ ಸಾದೆಯ ಅಥವಾ ಸಣ್ಣ ಸಣ್ಣ ಗುಂಡುಗಳಾಗಿ ಕೊಯಿದು, ಯಾ ಕತ್ತರಿಸಿ ಇರುವ ಸಾದೆಯ ಭಂಡಿ ಬೋಜಾ ವೊಂದಕ್ಕಾಗಲಿ ಅಥವಾ 68 ಘನ ಅಡಿಗಳುಳ್ಳ ಟರ್ ಬಂವಕ್ಕಾಗಲಿ ಆಯಾ ದರಖಾಸ್ತುದಾರರು ಕೊಡಲು ವೊಪ್ಪುವ ಕೇನಿಯರೇಜ್ ತೀರ್ವೆಯ ದರವನ್ನು ಅವರವರ ದರಖಾಸ್ತಿನಲ್ಲಿ ನಮೂದಿಸಿ ಇರಬೇಕು. ನಗದು ಅಥವಾ ನೋಟು ಮೂಲಕ (100) ರೂಪಾಯಿಗಳ ಡಿಪಾಜಿಟ್ ವೊಬಲಗಿನ ಸಮೇತ ಬಾರದೆ ಇರುವ ದರಖಾಸ್ತುಗಳು ತೆಗದುಕೊಳ್ಳಲ್ಪಡುವದಿಲ್ಲ. ಈ ಕಂಟ್ರಾಕ್ಟಿನಲ್ಲಿ ಸಾಧಾರಣವಾಗಿರುವ ಎರಡು ಭಂಡಿ ಬೋಜಾಗಳು ವೊಂದು ಟರ್ ಯಂದು ಎಣಿಸಲ್ಪಡುವದು.